JANUARY 04, 2026

# AKASHAVANI - DHARWAD

# PRADESH SAMACHARA (KANNADA) 12.00 P.M.

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**ಬೆಂಗಳೂರಿನ ಅರಣ್ಯ** ಭವನದಲ್ಲಿ, ಸಮಗ್ರ ನಿರ್ದೇಶನ ಮತ್ತು ನಿಯಂತ್ರಣ ಕೇಂದ್ರ ಹಾಗೂ 7 ವಿಭಾಗೀಯ ಕೇಂದ್ರಗಳನ್ನು, ಅರಣ್ಯ ಖಾತೆ ಸಚಿವ ಈಶ್ವರ ಖಂಡ್ರೆ ಉದ್ಘಾಟಿಸಿದರು. ರಾಜ್ಯದಲ್ಲಿ ಹೆಚ್ಚುತ್ತಿರುವ ಮಾನವ–ವನ್ಯಜೀವಿ ಸಂಘರ್ಷ ನಿಯಂತ್ರಿಸಲು, ತಂತ್ರಜ್ಞಾನ ಆಧಾರಿತ ಪರಿಹಾರ ನೀಡುವಲ್ಲಿ, ರಾಜ್ಯ ಮಟ್ಟದ ಸಮಗ್ರ ನಿರ್ದೇಶನ ಮತ್ತು ನಿಯಂತ್ರಣ ಕೇಂದ್ರ ಮಹತ್ವದ ಪಾತ್ರ ವಹಿಸಲಿದೆ, ಎಂದು ಸಚಿವ ಖಂಡ್ರೆ ತಿಳಿಸಿದರು. ಕಾಡಿನಂಚಿನ ಜನರು, ವನ್ಯಜೀವಿಗಳ ಚಲನವಲನದ ಬಗ್ಗೆ ಅಥವಾ ಅರಣ್ಯ ಅಪರಾಧಗಳ ಬಗ್ಗೆ, ಅರಣ್ಯ ಇಲಾಖೆಯ ಸಹಾಯವಾಣಿ ಸಂಖ್ಯೆ 1–9–2–6 ಕ್ಕೆ ಕರೆ ಮಾಡಿ, ಮಾಹಿತಿ ನೀಡಿದರೆ, ಕಮಾಂಡ್ ಸೆಂಟರ್ ಮೂಲಕ ಹಿರಿಯ ಅಧಿಕಾರಿಗಳು, ಸಂಪೂರ್ಣ ನಿಗಾ ವಹಿಸಲಿದ್ದಾರೆ ಎಂದು ಸಚಿವರು, ಭರವಸೆ ನೀಡಿದರು.

<><><>

**ಬೆಂಗಳೂರಿನ ಬೈಯ್ಯಪ್ಪನಹಳ್ಳಿಯಲ್ಲಿದ್ದ,** ಸರ್ಕಾರಿ ಸ್ವಾಮ್ಯದ, ಎನ್.ಜಿ.ಇ.ಎಫ್ ಕಾರ್ಖಾನೆಗೆ ಸೇರಿದ, 119 ಎಕರೆ ಪ್ರದೇಶದ ಪೈಕಿ, 65 ಎಕರೆಯಲ್ಲಿ, ವೃಕ್ಷೋದ್ಯಾನ ಅಭಿವೃದ್ಧಿಪಡಿಸಿ, ಬರುವ ಮಾರ್ಚ್‌ನಲ್ಲಿ, ಮೊದಲ ಹಂತವನ್ನು ಸಾರ್ವಜನಿಕ ಬಳಕೆಗೆ ಮುಕ್ತಗೊಳಿಸಲಾಗುವುದು ಎಂದು, ಕೈಗಾರಿಕೆಗಳ ಖಾತೆ ಸಚಿವ, ಎಂ.ಬಿ. ಪಾಟೀಲ, ತಿಳಿಸಿದ್ದಾರೆ.

<><><>

**ಇಂದು ವಿಶ್ವ ಬ್ರೈಲ್ ದಿನಾಚರಣೆ.** ದೃಷ್ಟಿ ವಿಶೇಷಚೇತನರು ಮತ್ತು ಭಾಗಶಃ ದೃಷ್ಟಿಹೀನರ, ಸಂವಹನ ಸಾಧನವಾಗಿ, ಬ್ರೈಲ್ ಲಿಪಿ ಮಹತ್ವದ ಬಗ್ಗೆ ಜಾಗೃತಿ ಮೂಡಿಸಲು, ವಿಶ್ವ ಬ್ರೈಲ್ ದಿನವನ್ನು, ಆಚರಿಸಲಾಗುತ್ತಿದೆ. ಗದಗ ಜಿಲ್ಲೆ, ರೋಣ ತಾಲೂಕು, ಹೊಳೆ ಆಲೂರಿನ, ಜ್ಞಾನಸಿಂಧು ಅಂಧ ಮಕ್ಕಳ ವಸತಿ ಶಾಲೆಯಲ್ಲಿ, ಬ್ರೈಲ್ ಲಿಪಿ ಶಿಕ್ಷಣದ ಜೊತೆ, ಅಂಧ ಮಕ್ಕಳ ಪತ್ಯೇತರ ಚಟುವಟಿಕೆಗಳಿಗೂ ಒತ್ತು ನೀಡಲಾಗುತ್ತಿದೆ. ಈ ಬಗ್ಗೆ ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ, ಜ್ಞಾನಸಿಂಧು ಅಂಧ ಮಕ್ಕಳ ವಸತಿ, ಶಾಲೆಯ ಕಾರ್ಯದರ್ಶಿ ಶಿವಾನಂದ ಕೇಲೂರ. .

<><><>

**ಶಿವಾನಂದ ಕೇಲೂರ ಧ್ವನಿ 39 ಸೆಕೆಂದುಗಳು**

<><><>

**ಹಾವೇರಿ ಜಿಲ್ಲಾಸ್ಪತ್ರೆಯಲ್ಲಿ,** 21 ಕೋಟಿ ರೂಪಾಯಿ ವೆಚ್ಚದಲ್ಲಿ ಕಟ್ಟಡ ನಿರ್ಮಿಸಲಾಗಿದ್ದು, 330 ರಿಂದ 500 ಹಾಸಿಗೆಗಳ ಸಾಮರ್ಥ್ಯದ ಮೂಲಕ, ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಶಿವಾನಂದ ಪಾಟೀಲ ತಿಳಿಸಿದ್ದಾರೆ. ಎಂ.ಆರ್.ಐ ಸ್ಕ್ಯಾನಿಂಗ್ ಯಂತ್ರ ಅಳವಡಿಸುವ ಕಾರ್ಯ ಎರಡು ತಿಂಗಳಲ್ಲಿ ಪೂರ್ಣಗೊಳ್ಳಲಿದೆ. ಡಿಸೆಂಬರ್ 23

ರಂದು ಫಿಲಿಪ್ಸ್ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಕಂಪನಿಗೆ ಗುತ್ತಿಗೆ ನೀಡಲಾಗಿದ್ದು, ಜಿಲ್ಲಾಸ್ಪತ್ರೆ ಅಥವಾ ಹಿಮ್ಸ್‌ನಲ್ಲಿ ಯಂತ್ರ ಅಳವಡಿಸುವ ಕುರಿತು ಚರ್ಚಿಸಲಾಗಿದೆ ಎಂದು ಸಚಿವರು ತಿಳಿಸಿದ್ದಾರೆ.

<><><>

**ಕರ್ನಾಟಕ ಸರ್ಕಾರ, ವಾರ್ತಾ** ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಕರ್ನಾಟಕ ಚಲನಚಿತ್ರ ಅಕಾದೆಮಿ ಮೂಲಕ ಆಯೋಜಿತ, 17ನೇ ಬೆಂಗಳೂರು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ–2026 ರ ಸಿದ್ಧತೆಯ ಕುರಿತಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಸಭೆ ಜರುಗಿತು.

<><><>

**ರಾಜ್ಯದಲ್ಲಿ, 2005 ರಲ್ಲಿ ಅಸ್ತಿತ್ವಕ್ಕೆ ಬಂದ** ಮಾಹಿತಿ ಹಕ್ಕು ಆಯೋಗವು, ಆಡಳಿತದಲ್ಲಿ ಪಾರದರ್ಶಕತೆ ಹಾಗೂ ಬದ್ಧತೆಯನ್ನು ತರುವಲ್ಲಿ ಪ್ರಮುಖ ಪಾತ್ರ ವಹಿಸಿದೆ ಎಂದು ಕರ್ನಾಟಕ ರಾಜ್ಯ ಮಾಹಿತಿ ಹಕ್ಕು ಆಯುಕ್ತರಾದ ಡಾಕ್ಟರ ಹರೀಶ್‌ಕುಮಾರ್ ತಿಳಿಸಿದ್ದಾರೆ. ಚಿಕ್ಕಮಗಳೂರು ನಗರದ, ಜಿಲ್ಲಾ ಪಂಚಾಯತ್, ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ, ಜಿಲ್ಲೆ, ತಾಲೂಕು ಹಾಗೂ ಗ್ರಾಮ ಪಂಚಾಯಿತಿ ಮಟ್ಟದ ಅಭಿವೃದ್ಧಿ ಅಧಿಕಾರಿಗಳಿಗೆ ಆಯೋಜಿಸಲಾಗಿದ್ದ, ಮಾಹಿತಿ ಹಕ್ಕು ಅಧಿನಿಯಮ–2005 ರ ಕುರಿತ, ಜಾಗೃತಿ ಕಾರ್ಯಾಗಾರ ಹಾಗೂ ಸಂವಾದ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

<><><>

**ಇಂದು, ರೈಲ್ವೆ ಖಾತೆ ರಾಜ್ಯ ಸಚಿವ** ವಿ. ಸೋಮಣ್ಣ ಅವರು, ವಿಜಯನಗರ ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ. ಈ ಮಧ್ಯಾಹ್ನ 3.30 ಕ್ಕೆ, ಹಗರಿಬೊಮ್ಮನಹಳ್ಳಿ ತಾಲೂಕು, ಗುಂಡಾ ರಸ್ತೆ ಮತ್ತು ಕೊಟ್ಟೂರಿನ ಮಧ್ಯದಲ್ಲಿರುವ, ರೇಲ್ವೆ ಹಳಿಯ ಬಳಿ ರಸ್ತೆ ಮೇಲ್ಸೆತುವೆ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ.

<><><>

**ದಲಿತ ಪತ್ರಕರ್ತರ ಸ್ಥಿತಿಗತಿಗಳ** ಕುರಿತು ರಾಜ್ಯದ ವಿವಿಧ ಜಿಲ್ಲೆಗಳಿಗೆ ತೆರಳಿ, ಸಮಗ್ರ ಅಧ್ಯಯನ ನಡೆಸಿ, ಸರ್ಕಾರಕ್ಕೆ ವರದಿ ಸಲ್ಲಿಸಲಾಗುವುದು ಎಂದು ವಿಧಾನ ಪರಿಷತ್ ಸದಸ್ಯರಾದ ಕೆ.ಶಿವಕುಮಾರ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ, ಕರ್ನಾಟಕ ಮಾಧ್ಯಮ ಅಕಾದೆಮಿ ಆಯೋಜಿಸಿದ, 'ಪತ್ರಿಕೆಗಳಲ್ಲಿ ಎ.ಐ ಬಳಕೆ ಮತ್ತು ಡಿಜಿಟಲ್ ಸವಾಲುಗಳ ನಿರ್ವಹಣೆ' ಕುರಿತು ತರಬೇತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

<><><>

**ಬಳ್ಳಾರಿ ನಗರದ ಬ್ಯಾನರ್ ಗಲಾಟೆ,** ಫೈರಿಂಗ್ ಪ್ರಕರಣದ ಹಿನ್ನಲೆ, ತಮಗೆ ಝಡ್ ಪ್ಲಸ್ ಭದ್ರತೆ ನೀಡುವಂತೆ ಶಾಸಕ ಜನಾರ್ದನ ರೆಡ್ಡಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರಿಗೆ ಪತ್ರ ಬರೆದು, ಮನವಿ ಮಾಡಿದ್ದಾರೆ. ತಮಗೆ ಜೀವ ಬೆದರಿಕೆ ಇದೆ ಎಂದು ಪತ್ರದಲ್ಲಿ ಉಲ್ಲೇಖಿಸಿರುವ ಶಾಸಕರು, ಮನವಿಯನ್ನು ಮುಖ್ಯ ಮಂತ್ರಿ ಸಿದ್ದರಾಮಯ್ಯ, ಗೃಹ ಖಾತೆ ಸಚಿವ ಡಾಕ್ಟರ ಜಿ. ಪರಮೇಶ್ವರ, ಪೊಲೀಸ್ ಮಹಾ ನಿರ್ದೇಶಕರಿಗೂ ಸಲ್ಲಿಸಿದ್ದಾರೆ.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ**

<><><>